## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1502

ಸದಸ್ಯರ ಹೆಸರು : ಡಾ: ಎಂ.ಜಿ. ಮುಳೆ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 20.03.2025

ಉತ್ತರಿಸುವ ಸಚಿವರು : ಗೃಹ ಸಚಿವರು

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರದ ಅನೇಕ ಮುಖ್ಯ ರಸ್ತೆಗಳಲ್ಲಿ ಸಂಚಾರಿ ಪೊಲೀಸರಿದ್ದರೂ ಕೆಲವರು ಮೊಬೈಲ್ ಬಳಸುತ್ತಾ ಸಂಚರಿಸುವ ಅಪರಾಧಗಳ ಬಗ್ಗೆ ಗಮನ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿರುತ್ತದೆ. |
| ಆ) | ಈ ಬಗ್ಗೆ ತಪಾಸಣೆ ಮಾಡಿ ಮೇಲಾಧಿಕಾರಿಗಳು ಕ್ರಮ ಕೈಗೊಳ್ಳದಿರುವ ನಿದರ್ಶನಗಳಿವೆಯೆ; ಇದ್ದರೆ ಎಷ್ಟು ಪೊಲೀಸರ ಮೇಲೆ ಕ್ರಮ ಕೈಗೊಳ್ಳಲಾಗಿದೆ: | ಬೆಂಗಳೂರು ನಗರ ಸಂಚಾರ ವಿಭಾಗದಲ್ಲಿ ಸಂಚಾರ ದಟ್ಟಣೆಯನ್ನು ಸುಗಮಗೊಳಿಸುವ ಉಪಕ್ರಮವಾಗಿ ಅಸ್ತ್ರಂ ಆ್ಯಪ್‌ಅನ್ನು ಪರಿಚಯಿಸಲಾಗಿದ್ದು, ಈ ಆ್ಯಪ್‌ಗೆ ಲಾಗಿನ್ ಆಗಿ, ಸಂಚಾರ ದಟ್ಟಣೆಯ ಸಂದೇಶಗಳನ್ನು ಪರಿಶೀಲಿಸುವುದು ಸುಗಮ ಸಂಚಾರ ನಿರ್ವಹಣೆಯ ಒಂದು ಭಾಗವಾಗಿದ್ದು, ಈ ಸಂದರ್ಭದಲ್ಲಿ ಮೊಬೈಲ್ ಬಳಸುವುದು ಅವಶ್ಯಕವಾಗಿರುತ್ತದೆ. |
| ಇ) | ಕರ್ತವ್ಯ ನಿರತ ಸಂಚಾರಿ ಪೊಲೀಸರು ಮೊಬೈಲ್ ಬಳಕೆ ಮಾಡದಂತೆ ನಿರ್ದೇಶನ ನೀಡಿ ಆದೇಶ/ಸುತ್ತೋಲೆ ಹೊರಡಿಸಲು ಕ್ರಮ ಕೈಗೊಳ್ಳಲಾಗುವುದೆ ? | ಸಂಚಾರ ವಿಭಾಗದಲ್ಲಿ ಕರ್ತವ್ಯಕ್ಕೆ ನೇಮಿಸಿರುವ ಜಂಕ್ಷನ್‌ಗಳಲ್ಲಿ ಸಿಬ್ಬಂದಿಗಳ ಹಾಜರಾತಿಯನ್ನು ಖಚಿತಪಡಿಸಿಕೊಳ್ಳುವುದಕ್ಕಾಗಿ ಇ–ಅಟೆಂಡೆನ್ಸ್ ಅನ್ನು ಪರಿಚಯಿಸಲಾಗಿದ್ದು, ಇದನ್ನು ದಾಖಲು ಮಾಡಲು ಸಿಬ್ಬಂದಿಗಳನ್ನು ತಮ್ಮ ಮೊಬೈಲ್‌ನಲ್ಲಿ ಆ್ಯಪ್‌ಗೆ ಲಾಗಿನ್ ಆಗಿ ದಾಖಲಾತಿಯನ್ನು ಕರ್ತವ್ಯ ನಿರ್ವಹಿಸುವ ಸ್ಥಳದಿಂದಲೇ ನೀಡಬೇಕಾಗಿದ್ದು, ಈ ಸಂದರ್ಭದಲ್ಲಿ ಮೊಬೈಲ್ ಬಳಸುವುದು ಅವಶ್ಯಕವಾಗಿರುತ್ತದೆ.<br><br>ರಸ್ತೆಯ ಮೇಲೆ ನಡೆಯುವ ಯಾವುದೇ ಕೃತ್ಯದ ಬಗೆಗೆ ಗೂಗಲ್ ಮ್ಯಾಪ್ ಅಥವಾ ಇನ್ನಿತರ ಮ್ಯಾಪ್‌ಗಳ ಮುಖೇನ ಮಾಹಿತಿಯನ್ನು ರಸ್ತೆ ಬಳಕೆದಾರರಿಗೆ ನೈಜ ಸಮಯದಲ್ಲಿ ತಲುಪಿಸುವ ಸಂದರ್ಭಗಳಲ್ಲಿ ಮೊಬೈಲ್ ಬಳಸುವುದು ಅವಶ್ಯಕವಾಗಿರುತ್ತದೆ. ಪ್ರವರ್ತನಾ ಚಟುವಟಿಕೆಯ ಒಂದು ಭಾಗವಾಗಿ ಎಲ್ಲಾ ಸಿಬ್ಬಂದಿಗಳಿಗೂ ನಿಯಮ ಉಲ್ಲಂಘನೆಗಳನ್ನು ತಮ್ಮ ಮೊಬೈಲ್ ಫೋನ್‌ಗಳಲ್ಲಿ ಛಾಯಾಚಿತ್ರಗಳನ್ನು ಸೆರೆಹಿಡಿದು ಅಪ್‌ಲೋಡ್ ಮಾಡುವ ಸಮಯದಲ್ಲಿ ಮೊಬೈಲ್ ಬಳಸಲಾಗುತ್ತಿದೆ.<br>ಈ ಮೇಲ್ಕಂಡ ಸಂದರ್ಭಗಳನ್ನು ಹೊರತುಪಡಿಸಿ, ಅನವಶ್ಯಕವಾಗಿ ಮೊಬೈಲ್ ಬಳಸುವ ಪೊಲೀಸ್ ಸಿಬ್ಬಂದಿಗಳು ಕಂಡುಬಂದಲ್ಲಿ ಅವರ ವಿರುದ್ಧ ಕರ್ನಾಟಕ ಪೊಲೀಸ್ ಶಿಸ್ತು ನಡವಳಿಯನ್ವಯ ಕ್ರಮಕೈಗೊಳ್ಳಲಾಗುತ್ತದೆ. |

ಹೆಚ್‌ಡಿ 134 ಎಸ್‌ಎಸ್‌ಟಿ 2025

(ಡಾ: ಜಿ.ಪರಮೇಶ್ವರ)
ಗೃಹ ಸಚಿವರು